## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಜಿ.ಎಸ್.ಸತೀಶ್‌ಕುಮಾರ್, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಇವರ ಹಿಂದಿನ ಸೇವೆಯನ್ನು ಪಿಂಚಣಿ ಉದ್ದೇಶಗಳಿಗಾಗಿ ಅರ್ಹತಾದಾಯಕ ಸೇವೆ ಎಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ: 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ತುಮಕೂರು ಜಿಲ್ಲಾ ಪಂಚಾಯಿತಿ ಇವರ ಪತ್ರ ಸಂಖ್ಯೆ : ಜಿಪಂ/ಆ(4)/ತಾಪಂ/ಸಿಆರ್-2/2017-18, ದಿನಾಂಕ : 15.02.2018

2) ಸರ್ಕಾರದ ಆದೇಶ ಸಂಖ್ಯೆ: ಆಇ 01 ಎಸ್‌ಆರ್‌ಎ 2011, ದಿನಾಂಕ : 05.03.2011

***********

**ಪ್ರಸ್ತಾವನೆ :-**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ತುಮಕೂರು ಜಿಲ್ಲಾ ಪಂಚಾಯಿತಿ ಇವರು ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:15.02.2018ರ ಪತ್ರದಲ್ಲಿ ಶ್ರೀ ಜಿ.ಎಸ್. ಸತೀಶ್‌ಕುಮಾರ್, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಇವರು ಈ ಹಿಂದೆ ಶಿಕ್ಷಣ ಇಲಾಖೆಯಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಾಗಿ ದಿನಾಂಕ 03.02.2004 ರಿಂದ 26.04.2010ರವರೆಗೆ ಸಲ್ಲಿಸಿರುವ ಸೇವೆಯನ್ನು ಪಿಂಚಣಿ ಉದ್ದೇಶಗಳಿಗಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರನ್ವಯ ಅರ್ಹತಾದಾಯಕ ಸೇವೆ ಎಂದು ಪರಿಗಣಿಸಲು ಸಂಬಂಧಪಟ್ಟ ದಾಖಲೆಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಶ್ರೀ ಜಿ.ಎಸ್.ಸತೀಶ್‌ಕುಮಾರ್, ಇವರು ತಮ್ಮ ಹಿಂದಿನ ಅರ್ಹತಾದಾಯಕ ಸೇವೆಯನ್ನು ಪರಿಗಣಿಸುವಂತೆ ಕೋರಿ ದಿನಾಂಕ 18.10.2012 ಮತ್ತು 24.11.2017 ರಂದು ತಾಲ್ಲೂಕು ಪಂಚಾಯತಿಗೆ ಮನವಿ ಸಲ್ಲಿಸಿದ್ದು, ಪ್ರಸ್ತುತ ಸದರಿಯವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ನೇಮಕಗೊಂಡ 3 ವರ್ಷಗಳ ಒಳಗೆ ಮನವಿ ಸಲ್ಲಿಸಿರುವುದು ಕಂಡುಬಂದಿರುತ್ತದೆ. ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿಯವರು ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಲ್ಲಿ ಸಲ್ಲಿಸಿರುವ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು, ನಿಯಮ 224-ಎ ರನ್ವಯ ಪಿಂಚಣಿ ಸೌಲಭ್ಯಗಳಿಗಾಗಿ ಪರಿಗಣಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 199 ಕೆಎಸ್‌ಎಸ್ 2018, ಬೆಂಗಳೂರು, ದಿನಾಂಕ:16.01.2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ : ಆಇ 01 ಎಸ್‌ಆರ್‌ಎ 2011, ದಿನಾಂಕ: 05.03.2011ರಲ್ಲಿನ ಷರತ್ತು ನಿಬಂಧನೆಗಳನ್ನು ಪಾಲಿಸುವ ಷರತ್ತಿಗೊಳಪಟ್ಟು, ಶ್ರೀ ಜಿ.ಎಸ್.ಸತೀಶ್‌ಕುಮಾರ್, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಚಳ್ಳಕೆರೆ ತಾಲ್ಲೂಕು ಪಂಚಾಯಿತಿ, ಚಿತ್ರದುರ್ಗ ಜಿಲ್ಲೆ ಇವರು ಈ ಹಿಂದೆ ಶಿಕ್ಷಣ ಇಲಾಖೆಯಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಾಗಿ ಕಾರ್ಯನಿರ್ವಹಿಸಿ ದಿನಾಂಕ:03.02.2004 ರಿಂದ 26.04.2010ರವರೆಗೆ ಸಲ್ಲಿಸಿರುವ ಸೇವೆಯನ್ನು ಪಿಂಚಣಿ ಸೌಲಭ್ಯಗಳಿಗಾಗಿ ಪರಿಗಣಿಸುವ ಸಲುವಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 224-ಎ ರನ್ವಯ ಅರ್ಹತಾದಾಯಕ ಸೇವೆ ಎಂದು ಪರಿಗಣಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 613 ಸೇ-3 2018, ದಿ:01.10.2018ರಲ್ಲಿ ನೀಡಿದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
16/1/19
(ಡಿ. ... ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ ಮತ್ತು ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16/1/2019

**ಇವರಿಗೆ:-**

1) ಮಹಾಲೇಖಪಾಲರು, (ಎ & ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಚಳ್ಳಕೆರೆ.
4) ಸಂಬಂಧಿಸಿದ ಅಧಿಕಾರಿಗೆ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ-2) ರವರುಗಳ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.